**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ರವರು ನಿಯಮ 72 ರಡಿ ಕೋರಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:- ರಾಜ್ಯದಲ್ಲಿ ಪ್ರತಿ ವರ್ಷ ವಿಧಾನ ಸಭಾ ಸದಸ್ಯರಿಗೂ ಹಾಗೂ ವಿಧಾನ ಪರಿಷತ್ತಿನ ಸದಸ್ಯರಿಗೆ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ರೂ:2 ಕೋಟಿಯನ್ನು ನೀಡಲಾಗುತ್ತಿದೆ. ಆದರೆ, ಇದು ಈ ಮೊತ್ತವು ಯಾವುದಕ್ಕೂ ಸಾಲದು, ವಿಧಾನ ಸಭೆಯ ಶಾಸಕರಿಗೆ ನೀಡಲಾಗುತ್ತಿರುವ ವಿಶೇಷ ಅನುದಾನ ರೂ.25 ರಿಂದ 50 ಕೋಟಿಯಂತೆ ನೀಡಿರುವುದು ಸಂತೋಷದ ವಿಷಯ. ಆದರೆ, ಅವರಂತೆ ಸ್ಥಳೀಯವಾಗಿ ವಿಧಾನ ಪರಿಷತ್ತಿನ ಸದಸ್ಯರಿಗೂ ಸಹ ಸಾಕಷ್ಟು ಜನರು ಸಾರ್ವಜನಿಕ ಕೆಲಸ ಕಾರ್ಯಗಳ ಬಗ್ಗೆ ದೂರುಗಳನ್ನು ನೀಡುತ್ತಾರೆ. ಆದರೆ, ವಿಧಾನ ಪರಿಷತ್ತಿನ ಸದಸ್ಯರಿಗೆ ಯಾವುದೇ ವಿಶೇಷ ಅನುದಾನನೀಡದೇ, ಕೈಕಟ್ಟಿ ಹಾಕಿರುವ ಪರಿಸ್ಥಿತಿಯನ್ನು ಅನುಭವಿಸುತ್ತಿದ್ದು, ಈ ಹಿನ್ನಲೆಯಲ್ಲಿ ವಿಧಾನ ಪರಿಷತ್ತಿನ ಸದಸ್ಯರಿಗೂ ಸಹ ವಿಶೇಷ ಅನುದಾನಗಳನ್ನು ಬಿಡುಗಡೆ ಮಾಡಿದ್ದಲ್ಲಿ, ಜನರಿಗೆ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ನೀಡಲು ಸಹಕಾರಿಯಾಗುವುದರಿಂದ ಈ ವಿಷಯವನ್ನು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಲು ಬಯಸುತ್ತೇನೆ.**

******

**ಉತ್ತರ:-**

ಸ್ಥಳೀಯರ ಆಶೋತ್ತರಗಳನ್ನು ಮತ್ತು ಅಗತ್ಯಗಳನ್ನು ಅತ್ಯುತ್ತಮವಾಗಿ ಈಡೇರಿಸುವ ದೃಷ್ಟಿಯಿಂದ ಹೆಚ್ಚು ಸ್ಪಂದನಶೀಲ ಯೋಜನೆಗಾಗಿ ಮತ್ತು ಸೇವೆಗಳನ್ನು ಒದಗಿಸುವುದಕ್ಕಾಗಿ ಸರ್ಕಾರವು ಬಡವರ ಮತ್ತು ದುರ್ಬಲ ವರ್ಗದವರ ಪ್ರಯೋಜನಕ್ಕಾಗಿ ಆಸ್ತಿಪಾಸ್ತಿಗಳನ್ನು ಸೃಜಿಸುವ, ಮೂಲಸೌಕರ್ಯ ಅಭಿವೃದ್ಧಿಪಡಿಸುವ ಮತ್ತು ಉದ್ಯೋಗವನ್ನು ಸೃಜಿಸುವ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ನಿರ್ಧರಿಸಿದೆ. ಅವುಗಳನ್ನು ಯೋಜಿಸುವುದು ಮತ್ತು ಅನುಷ್ಠಾನಕ್ಕೆ ತರುವುದನ್ನು ಶಾಸಕರ ಕ್ಷೇತ್ರದ ಮಟ್ಟದಲ್ಲೇ ಮಾಡಬಹುದಾಗಿರುವುದರಿಂದ, ಸರ್ಕಾರವು ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯನ್ನು 2001-02ನೇ ಸಾಲಿನಲ್ಲಿ ಪ್ರತಿ ಕ್ಷೇತ್ರಕ್ಕೆ ರೂ.25.00 ಲಕ್ಷಗಳನ್ನು ನಿಗದಿಪಡಿಸಿ ಪ್ರಾರಂಭಿಸಲಾಯಿತು. 2006-07ನೇ ಸಾಲಿನಿಂದ ಪ್ರತಿ ಕ್ಷೇತ್ರಕ್ಕೆ ಅನುದಾನವನ್ನು ರೂ.25.00 ಲಕ್ಷಗಳಿಂದ ರೂ.100.0 ಲಕ್ಷಗಳಿಗೆ ಹೆಚ್ಚಿಸಲಾಯಿತು. ತದನಂತರ 2013-14ನೇ ಸಾಲಿನಿಂದ ಪ್ರತಿ ಕ್ಷೇತ್ರಾಭಿವೃದ್ಧಿ ಅನುದಾನವನ್ನು ರೂ.100.00 ಲಕ್ಷಗಳಿಂದ ರೂ.200.00 ಲಕ್ಷಗಳಿಗೆ ಹೆಚ್ಚಿಸಲಾಗಿರುತ್ತದೆ.

ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ, ಮಾನ್ಯ ವಿಧಾನ ಸಭಾ ಸದಸ್ಯರಿಗೆ ಹಾಗೂ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಿಗೆ ವಾರ್ಷಿಕ ತಲಾ ರೂ.2.00ಕೋಟಿಗಳಂತೆ ಅನುದಾನ ಹಂಚಿಕೆ ಮಾಡಲಾಗುತ್ತಿದ್ದು, ಪ್ರತ್ಯೇಕವಾಗಿ ವಿಧಾನ ಸಭಾ ಸದಸ್ಯರುಗಳಿಗೆ ಯಾವುದೇ ವಿಶೇಷ ಅನುದಾನವನ್ನು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯಿಂದ ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ಹಂಚಿಕೆ ಮಾಡಲಾಗಿರುವುದಿಲ್ಲ ಎಂಬ ಅಂಶವನ್ನು ಸದನದ ಗಮನಕ್ಕೆ ತರಬಯಸುತ್ತೇನೆ.

**ಸಂಖ್ಯೆ: ಪಿಡಿಎಸ್ 79 ಕೆಎಲ್ಎಸ್ 2022**

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖಾ
ಸಚಿವರು